# <u>ಮಂಗಳೂರು ವಿಶ್ವವಿದ್ಯಾನಿಲಯ</u>

**ದಿನಾಂಕ 16.06.2022ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2022–23ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.**

ಉಪಸ್ಥಿತರು

ಅನುಪಸ್ಥಿತರು

## <u>ಪ್ರಾರಂಭಿಕ</u>

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು, ಎಲ್ಲಾ ಸದಸ್ಯರುಗಳು, ವಿಶೇಷ ಆಹ್ವಾನಿತರು ಮತ್ತು ಮಾಧ್ಯಮ ಮಿತ್ರರನ್ನು ಸಭೆಗೆ ಸ್ವಾಗತಿಸಿದರು.

- **ಸ್ವಾಗತ:**

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 30(1) (ii)ರ ಪ್ರಕಾರ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಹಾಜರಾಗಲು ಆಗಮಿಸಿರುವ ಡಾ.ಜೆನಿಫರ್ ಲೋಲಿಟಾ ಸಿ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಚೇರಿ, ಮಂಗಳೂರು ಇವರನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

2. ಪ್ರೊ.ಕೆ.ಎಸ್.ಜಯಪ್ಪ, ಪ್ರಾಧ್ಯಾಪಕರು, ಸ್ನಾತಕೋತ್ತರ ಸಾಗರ ಭೂ ವಿಜ್ಞಾನ, ಮಂಗಳೂರು ವಿಶ್ವವಿದ್ಯಾನಿಲಯ ಮಂಗಳಗಂಗೋತ್ರಿ ಇವರು ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರವನ್ನು ವಹಿಸಿಕೊಂಡಿರುತ್ತಾರೆ. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 19 (3)ರ ಪ್ರಕಾರ ಶೈಕ್ಷಣಿಕ ಮಂಡಳಿ ಸದಸ್ಯರಾಗಿರುತ್ತಾರೆ. ಇರವನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

3. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1) (vi) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರು ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿಗೆ ಸದಸ್ಯರುಗಳಾಗಿ ನಾಮನಿರ್ದೇಶನಗೊಂಡಿದ್ದ ಈ ಕೆಳಗಿನ ಸದಸ್ಯರುಗಳನ್ನು ಕುಲಸಚಿವರು ಸಭೆಗೆ ಸ್ವಾಗತಿಸಿದರು.

   1. ಶ್ರೀ ಮೋಹನ್ ನಾಯ್ಕ್, ಪ್ರಾಂಶುಪಾಲರು, ಕರಾವಳಿ ಕಾಲೇಜು, ಮಂಗಳೂರು.
   2. ಭಾಸ್ಕರ್ ಶೆಟ್ಟಿ, ಎಸ್., ಪ್ರಾಂಶುಪಾಲರು, ಡಾ.ಜಿ.ಶಂಕರ್ ಸರಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜ್ & ಸ್ನಾತಕೋತ್ತರ ಅಧ್ಯಯನ ಕೇಂದ್ರ, ಅಜ್ಜರಕಾಡು, ಉಡುಪಿ.
   3. ಡಾ.ಉದಯಕುಮಾರ್ ಶೆಟ್ಟಿ, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜ್ & ಸ್ನಾತಕೋತ್ತರ ಅಧ್ಯಯನ ಕೇಂದ್ರ, ಶಂಕರನಾರಾಯಣ, ಕುಂದಾಪುರ.

- **ಕೃತಜ್ಞತೆ:**

1. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 30(1) (ii)ರ ಪ್ರಕಾರ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಗಳಿಗೆ ಹಾಜರಾಗುತ್ತಿದ್ದ ಶ್ರೀ ಶ್ರೀಧರ ಬಾಬು ಎ.ಜೆ. ಇವರು ಜಂಟಿ ನಿರ್ದೇಶಕರ ಕರ್ತವ್ಯದಿಂದ ಬಿಡುಗಡೆಯಾಗಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

2. ಪ್ರೊ.ವೈ ಮುನಿರಾಜು, ಪ್ರಾಧ್ಯಾಪಕರು, ಸ್ನಾತಕೋತ್ತರ ವಾಣಿಜ್ಯ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರನ್ನು ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರದಿಂದ ಬಿಡುಗಡೆಗೊಳಿಸಿರುವುದರಿಂದ ಸದರಿಯವರನ್ನು ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

3. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30 (1) (vi) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಶೈಕ್ಷಣಿಕ ಮಂಡಳಿಗೆ ಸದಸ್ಯರುಗಳಾಗಿ ನಾಮನಿರ್ದೇಶನಗೊಂಡಿದ್ದ ಡಾ.ಗಿರಿಧರ ರಾವ್, ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಮುಡಿಪು ಇವರು ವರ್ಗಾವಣೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರೆಲ್ಲರೂ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕೆ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಸರ್ವರಿಗೂ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

## I. ದಿನಾಂಕ 04.03.2022ರಂದು ನಡೆದ ಶೈಕ್ಷಣಿಕ ಮಂಡಳಿಯ 2022–23ನೇ ಸಾಲಿನ ನಾಲ್ಕನೆಯ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

**ಈ ಕೆಳಗೆ ನಮೂದಿಸಿದ ಕಾರ್ಯಸೂಚಿಯನ್ನು ತಿದ್ದುಪಡಿಗೊಳಿಸಿ ನಡವಳಿಗಳನ್ನು ದೃಢೀಕರಿಸಲಾಯಿತು.**

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಸಾ.ಸ.4:16(2021–22)

**ವಿಷಯ:** ಮೂಡಬಿದರೆ ತಾಲೂಕಿನ ಬನ್ನಡ್ಕದಲ್ಲಿ ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸುವ ಬಗ್ಗೆ ರಚಿಸಿದ ಕರಡು ಅನುಶಾಸನದ ಅನುಮೋದನೆ ಬಗ್ಗೆ.

**ನಿರ್ಣಯ:** ವೆಚ್ಚವನ್ನು ವಿಶ್ವವಿದ್ಯಾನಿಲಯದ ಆಂತರಿಕ ಸಂಪನ್ಮೂಲಗಳಿಂದ ಭರಿಸಲಾಗುವುದು ಎಂಬ ವಿಷಯವನ್ನು ಕಾರ್ಯಸೂಚಿಯಲ್ಲಿ ನಮೂದಿಸಿಕೊಂಡು ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು, ಮಂಗಳಗಂಗೋತ್ರಿ, ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು ಹಾಗೂ ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು ನೆಲ್ಯಾಡಿ ಈ ಮೂರು ಘಟಕ ಕಾಲೇಜುಗಳ ಅನುಶಾಸನವನ್ನು ಸರಕಾರಕ್ಕೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

## II. ಘನತೆವೆತ್ತ ಕುಲಾಧಿಪತಿಗಳಿಗಳಿಂದ ಅನುಮೋದನೆಗೊಂಡಿರುವ ಈ ಕೆಳಗಿನ ಪರಿನಿಯಮವನ್ನು ಶೈಕ್ಷಣಿಕ ಮಂಡಳಿ ಸಭೆಯ ಗಮನಕ್ಕೆ ತರಲಾಯಿತು.

| ಕ್ರ. ಸಂ. | ವಿಷಯ | ಪ್ರಸ್ತಾವನೆಯನ್ನು ಸಲ್ಲಿಸಿದವರು | ಕುಲಾಧಿಪತಿಗಳ ಪತ್ರದ ವಿವರ |
|---|---|---|---|
| 1. | Statute Governing the Establishment of Post Graduate Department of Studies and Research in Geography in Mangalore University | ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ ಇವರ ಪತ್ರ ಸಂಖ್ಯೆ:ಒಗ/ಇಖಖಿ (1)/57/2016–17 ದಿನಾಂಕ 03.09.2021ರೊಂದಿಗೆ ಪರಿನಿಯಮನವನ್ನು ಘನತೆವೆತ್ತ ಮಾನ್ಯ ಕುಲಾಧಿಪತಿಗಳ ಅನುಮೋದನೆಗಾಗಿ ಸರಕಾರಕ್ಕೆ ಸಲ್ಲಿಸಲಾಗಿತ್ತು. | ಸದರಿ ಪರಿನಿಯಮಕ್ಕೆ ದಿನಾಂಕ 20.03.2022ರಂದು ಸನ್ಮಾನ್ಯ ಕುಲಾಧಿಪತಿಗಳು ಅನುಮೋದನೆ ನೀಡಿರುತ್ತಾರೆ ಎಂದು ಸರಕಾರದ ಅಪರ ಮುಖ್ಯ ಕಾರ್ಯದರ್ಶಿ ಉನ್ನತ ಶಿಕ್ಷಣ ಇಲಾಖೆ ಬೆಂಗಳೂರು ಇವರ ಪತ್ರ ಸಂಖ್ಯೆ ಇಡಿ 07 ಯುಡಿಎಸ್ 2021 ದಿನಾಂಕ 09.03.2022 ರಲ್ಲಿ ತಿಳಿಸಿರುತ್ತಾರೆ. |

## III. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:1(2022–23)
**ವಿಷಯ:** ಸರೋಶ್ ಇನ್ಸಿಟ್ಯೂಟ್ ಆಫ್ ಹೋಟೇಲ್ ಅಡ್ಮನಿಸ್ಟ್ರೇಶನ್ ಹಾಗೂ ನಿಟ್ಟೆ ಇನ್ ಸ್ಟಿಟ್ಯೂಟ್ ಆಫ್ ಟೂರಿಸಂ ಆಂಡ್ ಹಾಸ್ಪಿಟಾಲಿಟಿ ಸ್ಟಡೀಸ್ ಈ ವಿದ್ಯಾಸಂಸ್ಥೆಗಳು ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಸಂಯೋಜನೆ ಮುಂದುವರಿಸದ ಇರುವ ಬಗ್ಗೆ.
**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:2(2022–23)
**ವಿಷಯ:** ಬ್ಯಾರಿ ಭಾಷೆ ಕಲೆ ಪ್ರಕಾರಗಳ ವಿಷಯದಲ್ಲಿ ಸರ್ಟಿಫಿಕೇಟು, ಡಿಪ್ಲೋಮಾ ಮತ್ತು ಪಿ.ಜಿ. ಡಿಪ್ಲೊಮಾ ಕಾರ್ಯಕ್ರಮದ ವಿನಿಯಮ ಮತ್ತು ಪಠ್ಯಕ್ರಮಗಳ ಅನುಮೋದನೆ ಬಗ್ಗೆ.
**ನಿರ್ಣಯ:** ವಿನಿಯಮವನ್ನು ಅನುಮೋದಿಸಲಾಯಿತು. ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:3(2022–23)
**ವಿಷಯ:** ಸಂಖ್ಯಾಶಾಸ್ತ್ರ ಪಿ.ಹೆಚ್‌ಡಿ ಪದವಿ ಕಾರ್ಯಕ್ರಮದ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:4(2022–23)
**ವಿಷಯ:** ದ್ವಿತೀಯ ಸೆಮಿಸ್ಟರ್ ಬಿ.ಎ., ಬಿ.ಸಿ.ಎ., ಬಿ.ಬಿ.ಎ., ಬಿಎಸ್ಸಿ. & ಬಿ.ಕಾಂ. ಪದವಿ ಕಾರ್ಯಕ್ರಮಗಳ ಇಂಗ್ಲೀಷ್ ಭಾಷಾ ವಿಷಯದ ಪಠ್ಯಕ್ರಮದಲ್ಲಿನ ಮಾರ್ಪಾಡುಗಳ ಬಗ್ಗೆ.
**ನಿರ್ಣಯ:** ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:5(2022–23)
**ವಿಷಯ:** ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ ಅಳವಡಿಸಿರುವ ಬಿ.ಎಸ್ಸಿ. (ಹಾಸ್ಪಿಟಾಲಿಟಿ ಸೈನ್ಸ್) ಪದವಿ ಕಾರ್ಯಕ್ರಮದ ಪಠ್ಯ ಕ್ರಮದಲ್ಲಿನ ಮಾರ್ಪಾಡುಗಳ ಬಗ್ಗೆ.
**ನಿರ್ಣಯ:** ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:6(2022–23)
**ವಿಷಯ:** ಸ್ನಾತಕೋತ್ತರ ಸಂಖ್ಯಾಶಾಸ್ತ್ರ, ಕಾರ್ಯಕ್ರಮದಲ್ಲಿನ ಹೊಸ ಸಾಫ್ಟ್ ಕೋರ್ ಕೋರ್ಸಿನ ಅನುಮೋದನೆ ಬಗ್ಗೆ.
**ನಿರ್ಣಯ:** ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:7(2022–23)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ವಿಭಾಗಗಳಲ್ಲಿ ಸಂಶೋಧನಾ ಕಾರ್ಯಕ್ರಮಕ್ಕೆ ನೋಂದಣಿಗೊಂಡು ಕಾರಣಾಂತರಗಳಿಂದ ಸಂಶೋಧನಾ ಕಾರ್ಯವನ್ನು ಮುಂದುವರಿಸಲು/ನಿಗದಿತ ಸಮಯದೊಳಗೆ ಪ್ರಬಂಧ ಮಂಡಿಸಲು ಅಸಾಧ್ಯವಾಗಿರುವ ಸಂಶೋಧನಾ ವಿದ್ಯಾರ್ಥಿಗಳು ಪ್ರಬಂಧ ಮಂಡನೆ ಮಾಡದೆ ಹೆಚ್ಚಿನ ಸಮಯಾವಕಾಶ ಕೋರಿ ಸಲ್ಲಿಸಿರುವ ಮನವಿಯ ಬಗ್ಗೆ.

ನಿರ್ಣಯ: ದಿನಾಂಕ 16.05.2022ರಂದು ನಡೆದ ಸಿಂಡಿಕೇಟಿನ ನಿರ್ಣಯವನ್ನು ಪರಿಗಣಿಸಿಕೊಂಡು ಸದರಿ ವಿಚಾರಗಳ ಬಗ್ಗೆ ಪರಿಶೀಲಿಸಿ ಮುಂದಿನ ಸೂಕ್ತ ಕ್ರಮಕೈಗೊಳ್ಳಲು ಕುಲಸಚಿವರು (ಪರೀಕ್ಷಾಂಗ) ಇವರಿಗೆ ತಿಳಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:8(2022–23)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕಾರ್ಯಕ್ರಮಗಳ ಪ್ರವೇಶಾತಿಯಲ್ಲಿ ವಿಶ್ವವಿದ್ಯಾನಿಲಯದ ನಿವೃತ್ತ ಉದ್ಯೋಗಿಗಳ ಮಕ್ಕಳಿಗೆ ಅವಕಾಶ ನೀಡುವ ಬಗ್ಗೆ.
**ನಿರ್ಣಯ:** ತಿದ್ದುಪಡಿ ವಿನಿಯಮವನ್ನು ಸರಕಾರದ ಅನುಮೋದನೆಗೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಶೈ.ಸಾ.ಸ.1:9(2022–23)
**ವಿಷಯ:** ಸರ್ಕಾರದ ಸುತ್ತೋಲೆಯಲ್ಲಿಯ ಮಾರ್ಗಸೂಚಿಗಳನ್ನು ಪರಿನಿಯಮದಲ್ಲಿ ಅಳವಡಿಸುವ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಶೈ.ಸಾ.ಸ.1:10(2022–23)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "Sri Anthakrishna Gold Medal instituted by Mangala Alumni Association to Top Scrorer in M.Sc. Mathematics" ಚಿನ್ನದ ಪದಕ ಪ್ರದಾನ ಮಾಡುವ ಬಗ್ಗೆ.
**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:11(2022–23)
**ವಿಷಯ:** ರಾಷ್ಟ್ರೀಯ ಶಿಕ್ಷಣ ನೀತಿ–2020ರಡಿ ಹೊಸ ಪದವಿ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:12(2022–23)
**ವಿಷಯ:** ಕೊಡವ ಸ್ನಾತಕೋತ್ತರ ಕಾರ್ಯಕ್ರಮದ ಪರಿಷ್ಕೃತ ವಿದ್ಯಾರ್ಥಿ ಪ್ರವೇಶಾರ್ಹತೆ ಅನುಮೋದನೆ ಬಗ್ಗೆ
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ಶೈ.ಸಾ.ಸ.1:13(2022–23)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2017–18ನೇ ಸಾಲಿನ ಲೆಕ್ಕಪರಿಶೋಧಕರ ವರದಿ–ಅನುಸರಣಾ ವರದಿಯ ಅನುಮೋದನೆ ಕುರಿತು.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹಣಕಾಸು:ಶೈ.ಸಾ.ಸ.1:14(2022–23)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2022–23ನೇ ಸಾಲಿನ ಆಯವ್ಯಯ ಅಂದಾಜುಗಳು ಮತ್ತು 2021–22ನೇ ಸಾಲಿನ ಪರಿಷ್ಕೃತ ಆಯವ್ಯಯ ಅಂದಾಜುಗಳ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಶೈ.ಸಾ.ಸ.1:15(2022–23)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 2020–21ನೇ ಸಾಲಿನ ವಾರ್ಷಿಕ ವರದಿಯ ಅನುಮೋದನೆ ಬಗ್ಗೆ.
**ನಿರ್ಣಯ:** ತಿದ್ದುಪಡಿಗಳನ್ನು ಸೂಚಿಸಿ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:16(2022–23)

**ವಿಷಯ:** ಸಂತ ಅಲೋಶಿಯಸ್ ಕಾಲೇಜು (ಸ್ವಾಯತ್ತ) ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಬಿ.ಸಿ.ಎ. ಕಾರ್ಯಕ್ರಮಕ್ಕೆ 50 ವಿದ್ಯಾರ್ಥಿ ಪರಿಮಿತಿಯೊಂದಿಗೆ ಹೆಚ್ಚುವರಿ ವಿಭಾಗಕ್ಕೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಸಮಿತಿಯ ವರದಿಯನ್ನು ಪರಿಗಣಿಸಿಕೊಂಡು ಹೆಚ್ಚುವರಿ ವಿಭಾಗಕ್ಕೆ ಅನುಮತಿ ನೀಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:17(2022–23)

**ವಿಷಯ:** ಸಂತ ಅಲೋಶಿಯಸ್ ಕಾಲೇಜು (ಸ್ವಾಯತ್ತ) ಮಂಗಳೂರು ಇಲ್ಲಿ B.Com. (Apprenticeship/Internship Embedded) ಮತ್ತು B.Sc. (Visual Communication) ಎಂಬ ಹೊಸ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:18(2022–23)

**ವಿಷಯ:** ಸ್ನಾತಕೊತ್ತರ ವೈದ್ಯಕೀಯ ಭೌತಶಾಸ್ತ್ರ ಕಾರ್ಯಕ್ರಮದ ಪರಿಷ್ಕೃತ ವಿದ್ಯಾರ್ಥಿ ಪ್ರವೇಶಾರ್ಹತೆ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:19(2022–23)

**ವಿಷಯ:** ಯುವ ರೆಡ್ ಕ್ರಾಸ್ ಕೋರ್ಸಿನ ಪಠ್ಯ ಕ್ರಮ ಮತ್ತು ಬೋಧನಾರ್ಹತೆಯ ಅನುಮೋದನೆ ಬಗ್ಗೆ.

**ನಿರ್ಣಯ:** ಸೂಚಿಸಿರುವ ತಿದ್ದುಪಡಿಯೊಂದಿಗೆ ಕಲಾ ನಿಕಾಯದ ಅನುಮೋದನೆಯನ್ನು ಪಡೆದುಕೊಳ್ಳುವ ಷರತ್ತಿನ ಮೇರೆಗೆ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಶೈ.ಸಾ.ಸ.1:20(2022–23)

**ವಿಷಯ:** 2022–23ನೇ ಸಾಲಿಗೆ ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಬಗ್ಗೆ.

**ನಿರ್ಣಯ:** ಮಾನ್ಯ ಕುಲಪತಿಯವರಿಗೆ ಅಧಿಕಾರ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.1:21(2022–23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳಲ್ಲಿ ನಡೆಸಲಾಗುವ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ನಿಯಂತ್ರಿಸುವ ಪರಿನಿಯಮದ ತಿದ್ದುಪಡಿ ಅನುಮೋದನೆ ಬಗ್ಗೆ.

**ನಿರ್ಣಯ:** ತಿದ್ದುಪಡಿ ಪರಿನಿಯಮವನ್ನು ಸರಕಾರದ ಅನುಮೋದನೆಗೆ ಸಲ್ಲಿಸಲು ಸೂಕ್ತ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಸಾ.ಸ.1:22(2022–23)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿನ ಹೊಸ ಕಾಲೇಜುಗಳ ಸಂಯೋಜನೆ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿರುವ ವರದಿಗಳನ್ನು ಅಂಗೀಕರಿಸಿ ಹೊಸ ಕಾಲೇಜುಗಳಿಗೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

ಮುಂದುವರಿದು, ತರಗತಿಗಳು ಪ್ರಾರಂಭವಾಗುವ ಮೊದಲು ಏಕ ಸದಸ್ಯ ಸಮಿತಿಯು ಕಾಲೇಜಿಗೆ ಭೇಟಿ ನೀಡಿ ಮೂಲಭೂತ ಸೌಕರ್ಯಗಳು ಹಾಗೂ ಇತರೇ ಅಗತ್ಯ ಸೌಲಭ್ಯಗಳನ್ನು ಪೂರೈಸಿರುವ ಬಗ್ಗೆ ವರದಿ ನೀಡಲು ತಿಳಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಸಾ.ಸ.1:23(2022–23)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ವಿಸ್ತರಣಾ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ ಮುಂದುವರಿಕೆ/ವಿಸ್ತರಣಾ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

ಮುಂದುವರಿದು, ಸಮಿತಿಯು ನಿಗದಿಪಡಿಸಿದ ವಿದ್ಯಾರ್ಥಿ ಪರಿಮಿತಿಯ ಬಗ್ಗೆ ಈ ಕೆಳಗೆ ನಮೂದಿಸಿರುವ ಕಾಲೇಜು ಪ್ರಾಂಶುಪಾಲರುಗಳಿಂದ ಪತ್ರ ಪಡೆಯಲು ಸೂಚಿಸಲಾಯಿತು.

1. ಮೆರೇಡಿಯನ್ ಕಾಲೇಜು, ಉಳ್ಳಾಲ
2. ಶಾರದಾ ಕಾಲೇಜು, ತಲಪಾಡಿ
3. ಮಿಲಾಗ್ರಿಸ್ ಕಾಲೇಜು, ಮಂಗಳೂರು
4. ಡಾ. ದಯಾನಂದ ಪೈ ಶ್ರೀ ಸತೀಶ್ ಪೈ ಸರಕಾರಿ ಪ್ರಥಮ ದರ್ಜೆ ಕಾಲೇಜು, ಮಂಗಳೂರು

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಸಾ.ಸ.1:24(2022–23)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಹೊಸತಾಗಿ ಶಾಶ್ವತ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ ಹೊಸ ಶಾಶ್ವತ ಸಂಯೋಜನೆ/ಶಾಶ್ವತ ಸಂಯೋಜನೆ ಮುಂದುವರಿಕೆ/ಮುಂದುವರಿಕೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

ಸಮಿತಿಯ ವರದಿಯಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜು, ಕೋಟೇಶ್ವರ, ಕುಂದಾಪುರ ಇವರು ಅರ್ಜಿ ಸಲ್ಲಿಸಿರುವ ಬಿ.ಎಸ್ಸಿ. (ರಸಾಯಶಾಸ್ತ್ರ, ಕಂಪ್ಯೂಟರ್ ಸಾಯನ್ಸ್, ಗಣಿತಶಾಸ್ತ್ರ, ಭೌತಶಾಸ್ತ್ರ) ಮತ್ತು ಎಂ.ಕಾಂ. ಕಾರ್ಯಕ್ರಮಗಳಿಗೆ ಶಿಫಾರಸ್ಸು ಮಾಡಿರದ ಬಗ್ಗೆ ಸ್ಥಳೀಯ ವಿಚಾರಣಾ ಸಮಿತಿಯ ಅಧ್ಯಕ್ಷರಿಂದ ಅಭಿಪ್ರಾಯ ಪಡೆಯಲು ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಸಾ.ಸ.1:25(2022–23)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಾದ ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜು, ಮಂಗಳೂರು, ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು, ಮಂಗಳಗಂಗೋತ್ರಿ ಹಾಗೂ ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು, ನೆಲ್ಯಾಡಿ ಇದರ ಸ್ಥಾಪನೆ ಹಾಗೂ ಹುದ್ದೆಗಳ ಸೃಜನೆ ಬಗ್ಗೆ ರಚಿಸಿದ ಕರಡು ಪರಿನಿಯಮಗಳನ್ನು ತಿದ್ದುಪಡಿ ಮಾಡಿ ಅನುಮೋದಿಸುವ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಶೈ.ಸಾ.ಸ.1:26(2022–23)

**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿನ ಕಾಲೇಜುಗಳ ಮುಂದುವರಿಕೆ ಸಂಯೋಜನೆ ಮಂಜೂರು ಮಾಡುವ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2022–23ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ ಮುಂದುವರಿಕೆ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿನ ಪರಿಗಣನೆಗೆ ಶಿಫಾರಸ್ಸು ಮಾಡಲಾಯಿತು.

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಮಟ್ಟದ ಕಾರ್ಯಕ್ರಮಗಳಿಗೆ ಅಳವಡಿಸಲಾಗಿರುವ ರಾಷ್ಟ್ರೀಯ ಶಿಕ್ಷಣ ನೀತಿ –2020ರಲ್ಲಿ ಪರಿಸರ ಅಧ್ಯಯನ ವಿಷಯದ ಬೋಧನೆಗೆ ಸಂಬಂಧಿಸಿ ತಮ್ಮ ಕಾಲೇಜಿನಲ್ಲಿ ಮತ್ತು ಇತರೆ ಸರಕಾರಿ ಕಾಲೇಜುಗಳಲ್ಲಿ ಉಂಟಾಗಿರುವ ಗೊಂದಲಗಳ ಬಗ್ಗೆ ಸದಸ್ಯರೊಬ್ಬರು ಸಭೆಯಲ್ಲಿ ಚರ್ಚಿಸಿದಾಗ, ಮಾನ್ಯ ಕುಲಪತಿಯವರು ಸದರಿ ವಿಚಾರವನ್ನು ಪರಿಗಣಿಸಿಕೊಂಡು ಕಾಲೇಜುಗಳಲ್ಲಿ ಸದರಿ ಕೋರ್ಸನ್ನು ಬೋಧಿಸಲು ವಿಜ್ಞಾನ ವಿಷಯದ ಉಪನ್ಯಾಸಕರು ಲಭ್ಯವಿಲ್ಲದ ಪಕ್ಷದಲ್ಲಿ ಇತರೆ ವಿಷಯದ ಲಭ್ಯ ಅನುಭವಿ ಉಪನ್ಯಾಸಕರುಗಳು ಪರಿಸರ ಅಧ್ಯಯನ ವಿಷಯದ ಬೋಧನೆಗೆ ಅನುಕೂಲವಾಗುವಂತೆ ತರಬೇತಿ/ಓರಿಯಂಟೇಶನ್ ಪಡೆದುಕೊಂಡು ವಿದ್ಯಾರ್ಥಿಗಳಿಗೆ ಉಪನ್ಯಾಸ ಮಾಡಲು ಕ್ರಮಕೈಗೊಳ್ಳಬೇಕಾಗಿ ಸಲಹೆ ನೀಡಿದರು.

2. ಮಂಗಳೂರು ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಕಾಲೇಜುಗಳ "ಅತ್ಯುತ್ತಮ ಕಾಲೇಜು ಸಂಚಿಕೆ 2020–21ರ ಸ್ಪರ್ಧೆಯ ಫಲಿತಾಂಶವನ್ನು ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಪ್ರಕಟಿಸಿ ಬಹುಮಾನಗಳನ್ನು ವಿತರಿಸಲಾಯಿತು. ವಿವರಗಳು ಈ ಕೆಳಗಿನಂತಿವೆ.

**ವರ್ಗ–1 (Category –I)**

ಪ್ರಥಮ ಬಹುಮಾನ: "ಮನಿಷಾ" – ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಕಾಲೇಜು (ಸ್ವಾಯತ್ತ), ಉಜಿರೆ

ದ್ವಿತೀಯ ಬಹುಮಾನ: "ದೀಪಿಕಾ" – ಬೆಸೆಂಟ್ ಮಹಿಳಾ ಕಾಲೇಜು, ಮಂಗಳೂರು

ತೃತೀಯ ಬಹುಮಾನ: "ಸುದರ್ಶನ" – ಸರಕಾರಿ ಪ್ರಥಮ ದರ್ಜೆ ಕಾಲೇಜು, ತೆಂಕನಿಡಿಯೂರು

"ವಿಭವ" – ಡಾ. ಎನ್.ಎಸ್.ಎ.ಎಮ್. ಪ್ರಥಮ ದರ್ಜೆ ಕಾಲೇಜು, ನಿಟ್ಟೆ

**ವರ್ಗ–2 (Category – I I)**

ಪ್ರಥಮ ಬಹುಮಾನ: "ಹಿರಿಯ ಸಿರಿ" – ಸರಕಾರಿ ಪ್ರಥಮ ದರ್ಜೆ ಕಾಲೇಜು, ಹಿರಿಯಡ್ಕ

ದ್ವಿತೀಯ ಬಹುಮಾನ: " ಸುಪ್ರಭಾ" – ಉಪೇಂದ್ರ ಪೈ ಮೆಮೋರಿಯಲ್ ಕಾಲೇಜು, ಉಡುಪಿ

ತೃತೀಯ ಬಹುಮಾನ: " ಮಾರ್ದನಿ" – ಸೈಂಟ್ ಆಂಟೋನಿ ಕಾಲೇಜ್ ಆಫ್ ಕಾಮರ್ಸ್, ಬೆಳ್ತಂಗಡಿ

"ಪ್ರೊವಿಡೆನ್ಸ್" – ಪೊಂಪೈ ಕಾಲೇಜು, ಐಕಳ

3. ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ವರ್ಷ 2022–23ನೇ ಸಾಲಿನ ಸಂಯೋಜನೆಗೆ ಸಂಬಂಧಿಸಿ ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲನೆಯನ್ನು ನಡೆಸಿ ಸೀಮಿತ ಅವಧಿಯೊಳಗೆ ಅಚ್ಚುಕಟ್ಟಾಗಿ ಕಾರ್ಯನಿರ್ವಹಿಸಿ ವಿಶ್ವವಿದ್ಯಾನಿಲಯಕ್ಕೆ ವರದಿಯನ್ನು ಸಲ್ಲಿಸಿರುವ ಸಮಿತಿಯ ಅಧ್ಯಕ್ಷರುಗಳಿಗೆ ಮತ್ತು ಸದಸ್ಯರುಗಳಿಗೆ ಸಭೆಯಲ್ಲಿ ಕೃತಜ್ಞತೆಯನ್ನು ಸಲ್ಲಿಸಲಾಯಿತು.

ಪ್ರೊ. ರವೀಂದ್ರಾಚಾರಿ, ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ ಇವರ ಮಾರ್ಗದರ್ಶನದಲ್ಲಿ ಸದರಿ ಕಾರ್ಯವು ಸಾಂಗವಾಗಿ ನಡೆದಿರುವ ಬಗ್ಗೆ ಸಭೆಯಲ್ಲಿ ಅವರ ಕಾರ್ಯಕ್ಷಮತೆಯನ್ನು ಶ್ಲಾಘಿಸಿ ಕೃತಜ್ಞತೆಯನ್ನು ಸಲ್ಲಿಸಲಾಯಿತು.

ಸ್ಥಳೀಯ ವಿಚಾರಣಾ ಸಮಿತಿಗಳು ಕಾಲೇಜುಗಳಿಗೆ ಭೇಟಿ ನೀಡಿರುವ ಸಂಧರ್ಭದಲ್ಲಿ ಸಹಕಾರ ನೀಡಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೂ ಸಭೆಯು ಕೃತಜ್ಞತೆಯನ್ನು ಸಲ್ಲಿಸಿತು.

4. ಶೈಕ್ಷಣಿಕ ವರ್ಷ 2022–23ನೇ ಸಾಲಿನ ಸಂಯೋಜನೆಗೆ ಸಂಬಂಧಿಸಿದ ಪ್ರಕ್ರಿಯೆಯನ್ನು ಕಾಲ ಮಿತಿಯೊಳಗೆ ನಿರ್ವಹಿಸಲು ಸಹಕರಿಸಿದ ಶೈಕ್ಷಣಿಕ ವಿಭಾಗದ ವಿಶೇಷಾಧಿಕಾರಿಯವರು ಮತ್ತು ಎಲ್ಲಾ ಸಿಬ್ಬಂದಿಗಳನ್ನು ಮಾನ್ಯ ಕುಲಪತಿಯವರು ಸಭೆಯಲ್ಲಿ ಶ್ಲಾಘಿಸಿ ಕೃತಜ್ಞತೆಯನ್ನು ಸಲ್ಲಿಸಿದರು.

5. ಮಂಗಳೂರು ವಿಶ್ವವಿದ್ಯಾನಿಲಯದ 2020–21ನೇ ಸಾಲಿನ ವಾರ್ಷಿಕ ವರದಿಗೆ ಸಂಬಂಧಿಸಿ ಮಾಹಿತಿಗಳನ್ನು ಕ್ರೋಢೀಕರಿಸಿಕೊಂಡು ಕ್ಲಪ್ತ ಸಮಯದಲ್ಲಿ ಸಿದ್ಧಗೊಳಿಸಿರುವ ಬಗ್ಗೆ ಸಮಿತಿಯ ಅಧ್ಯಕ್ಷರಾದ ಪ್ರೊ. ಬಿ.ಹೆಚ್.ಶೇಖರ್ ಮತ್ತು ಸಮಿತಿಯ ಸದಸ್ಯರುಗಳಿಗೆ ಮಾನ್ಯ ಕುಲಪತಿಯವರು ಸಭೆಯಲ್ಲಿ ಕೃತಜ್ಞತೆಯನ್ನು ಸಲ್ಲಿಸಿದರು.

ಮಾನ್ಯ ಕುಲಪತಿಗಳು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನು ಅರ್ಪಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| **ಕುಲಸಚಿವರು.** | **ಕುಲಪತಿಗಳು.** |